ಕರ್ನಾಟಕ ಸರ್ಕಾರ

**ತಾಂತ್ರಿಕ ಶಿಕ್ಷಣ ಇಲಾಖೆ**

DTE-ADMIOACM2/59/2023

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:10-10-2023.

**-:: ಸು ತ್ತೋ ಲೆ ::-**

**ವಿಷಯ:** 2023-24ನೇ ಸಾಲಿನ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ವಿದ್ಯಾರ್ಥಿಗಳ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪ್ರವೇಶಾವಧಿ ವಿಸ್ತರಿಸುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಸಮ ಸಂಖ್ಯೆ ಸುತ್ತೋಲೆ ದಿನಾಂಕ. DTE-ADMIOACM2/50/2023 (ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್)
2. ಈ ಕಛೇರಿ ಸುತ್ತೋಲೆ ಪತ್ರ ಸಂ. DTE-ADMIOACM2/49/2023. ದಿ:02-08-2023. (ಖಾಸಗಿ ಪಾಲಿಟೆಕ್ನಿಕ್)

•••••••••

2023-24ನೇ ಸಾಲಿನಲ್ಲಿ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳ ಪ್ರವೇಶಕ್ಕೆ ಸಂಬಂಧಿಸಿದಂತೆ ಅಂತಿಮ ದಿನಾಂಕವನ್ನು ಈಗಾಗಲೇ ನಿಗಧಿಪಡಿಸಲಾಗಿತ್ತು. ಮುಂದುವರೆದಂತೆ, Make up ಪರೀಕ್ಷೆಯ ಫಲಿತಾಂಶ ಪ್ರಕಟಗೊಳ್ಳುವ ಸಂಭವ ಇರುವುದರಿಂದ ಈ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಅರ್ಹ ಅಭ್ಯರ್ಥಿಗಳ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪ್ರವೇಶಾವಧಿಯನ್ನು ಈ ಕೆಳಕಂಡಂತೆ ವಿಸ್ತರಿಸಿ ಪ್ರವೇಶ ಪಡೆಯಲು ಅನುಮತಿ ನೀಡಲಾಗಿದೆ.

- **Make up ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ವಿದ್ಯಾರ್ಥಿಗಳು 3 & 5ನೇ ಸೆಮಿಸ್ಟರ್ ಪ್ರವೇಶ ಹಾಗೂ ಮರುಪ್ರವೇಶ ದಿನಾಂಕ:16-10-2023 ರ ಒಳಗೆ ಯಾವುದೇ ದಂಡ ಶುಲ್ಕವಿಲ್ಲದೆ ಪ್ರವೇಶ ನೀಡುವುದು.**

- **ಹಾಲಿ ವ್ಯಾಸಂಗ ಮಾಡುತ್ತಿರುವ 3 & 5ನೇ ಸೆಮಿಸ್ಟರ್ ವಿದ್ಯಾರ್ಥಿಗಳು ಪ್ರವೇಶ ಪಡೆಯಲು ಅರ್ಹರಿದ್ದು, ತರಗತಿಗಳಿಗೂ ಹಾಜರಾಗುತ್ತಿದು, ಕಾರಣಂತರಗಳಿಂದ ಪ್ರವೇಶ ಪಡೆಯಲು ಸಾಧ್ಯವಾಗದ ಕಾರಣ ಅಂತಹ ವಿದ್ಯಾರ್ಥಿಗಳಿಗೆ ಪ್ರವೇಶ ಹಾಗೂ ಮರುಪ್ರವೇಶ ಪಡೆಯಲು ಅಂತಿಮವಾಗಿ ದಿನಾಂಕ:16-10-2023 ರವರೆಗೆ ರೂ.1,000/- ದಂಡ ಶುಲ್ಕದೊಂದಿಗೆ ಪ್ರವೇಶ ನೀಡುವುದು.**

ಮೇಲ್ಕಂಡಂತೆ ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ನೀಡುವ ಬಗ್ಗೆ ಕ್ರಮ ತೆಗೆದುಕೊಳ್ಳಬೇಕೆಂದು ಸೂಚಿಸಲಾಗಿದೆ. 03 ಮತ್ತು 05ನೇ ಸೆಮಿಸ್ಟರ್‌ಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳು ನಿಯಮಗಳ ಪ್ರಕಾರ ಅರ್ಹತೆ ಹೊಂದಿರುವುದನ್ನು ಖಚಿತಪಡಿಸಿಕೊಂಡು ಹಾಗೂ ತಾಂತ್ರಿಕ ಪರೀಕ್ಷಾ ಮಂಡಳಿ ನಿಯಮಗಳನ್ವಯ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟು ಪ್ರವೇಶ ನೀಡತಕ್ಕದ್ದು.

ತಾಂತ್ರಿಕ ಪರೀಕ್ಷಾ ಮಂಡಳಿ ನಿಯಮಗಳನ್ವಯ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟು ಮೇಲ್ಕಂಡ ನಮೂದಿಸಿರುವ ದಿನಾಂಕವು ಅಂತಿಮವಾಗಿದ್ದು, ಹಾಗೂ ಯಾವುದೇ ಕಾರಣಕ್ಕೂ ಪುನಃ ದಿನಾಂಕವನ್ನು ವಿಸ್ತರಿಸಲಾಗುವುದಿಲ್ಲ. ಮೇಲ್ಕಂಡ ಅವಧಿಯಲ್ಲಿ ಸದರಿ ವಿದ್ಯಾರ್ಥಿಗಳಿಗೆ ಅನ್ವಯವಾಗುವಂತೆ ಪ್ರವೇಶ ನೀಡತಕ್ಕದ್ದು. ನಿಯಮಗಳನ್ನು ಮೀರಿ ಮಾಡಿದ ಪ್ರವೇಶಗಳಿಗೆ ಸಂಬಂಧಿಸಿದ ಪ್ರಿನ್ಸಿಪಾಲರೇ ನೇರ ಜವಾಬ್ದಾರರಾಗುತ್ತಾರೆ. ಪ್ರಯುಕ್ತ, ಇದನ್ನು ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ,

ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರುಗಳಿಗೆ - ಅಗತ್ಯ ಕ್ರಮಕ್ಕಾಗಿ ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು ಮತ್ತು ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಅಭ್ಯರ್ಥಿಗಳ ಮತ್ತು ಪೋಷಕರ ಗಮನಕ್ಕೆ ತರುವುದು.

**ಪ್ರತಿ ಇವರಿಗೆ ಮಾಹಿತಿಗಾಗಿ:**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರವರ ಆಪ್ತಶಾಖೆಗೆ.
4. ಕಾರ್ಯದರ್ಶಿಯವರ ಆಪ್ತಶಾಖೆಗೆ.
5. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
6. ಇ-ಗವರ್ನನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಆರ್.ಡಿ.ಎಂ ವಿಭಾಗಗಳಿಗೆ.
8. ಇಆರ್‌ಎಸ್(3) ವಿಭಾಗಕ್ಕೆ.
9. ಕಛೇರಿ ಪ್ರತಿ.